ಕರ್ನಾಟಕ ವಿಧಾನ ಪರಿಷತ್

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 910

2 ಸದಸ್ಯರ ಹೆಸರು : ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ)

3 ಉತ್ತರಿಸಬೇಕಾಗಿದ್ದ ದಿನಾಂಕ : 23.02.2024.

4 ಉತ್ತರಿಸುವವರು : ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಜಿಲ್ಲಾ ಪಂಚಾಯಿತಿ (ಜಿ.ಪಂ) ಮತ್ತು ತಾಲ್ಲೂಕು ಪಂಚಾಯಿತಿ (ತಾ.ಪಂ)ಗಳಲ್ಲಿ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಇರುವ ದ್ವಿತೀಯ ದರ್ಜೆ ಸಹಾಯಕ/ಪ್ರಥಮ ದರ್ಜೆ ಸಹಾಯಕ/ಶೀಘ್ರಲಿಪಿಗಾರ ಮತ್ತು ಅಧೀಕ್ಷಕ ಹುದ್ದೆಗಳ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಹುದ್ದೆಗಳು ಅನುಕಂಪ ಆಧಾರಿತ ನೇಮಕಾತಿಗಳಾಗಿವೆ; (ಜಿಲ್ಲಾವಾರು, ಹುದ್ದೆವಾರು ಸಂಪೂರ್ಣ ವಿವರ ನೀಡುವುದು). | ಮಂಜೂರಾಗಿರುವ ಮತ್ತು ಖಾಲಿ ಇರುವ ದ್ವಿತೀಯ ದರ್ಜೆ ಸಹಾಯಕ, ಪ್ರಥಮ ದರ್ಜೆ ಸಹಾಯಕ, ಶೀಘ್ರಲಿಪಿಗಾರ ಮತ್ತು ಅಧೀಕ್ಷಕ ಹುದ್ದೆಗಳ ಸಂಪೂರ್ಣ ವಿವರಗಳನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ.<br><br>ಅನುಕಂಪದ ನೇಮಕಾತಿ<br>ಪ್ರಥಮ ದರ್ಜೆ ಸಹಾಯಕ — 178<br>ದ್ವಿತೀಯ ದರ್ಜೆ ಸಹಾಯಕ — 130 |
| (ಆ) | ಪ್ರಾದೇಶಿಕ ಕಛೇರಿಗಳಿಂದ ಸ್ವೀಕೃತವಾಗುವ ಅನುಕಂಪ ನೇಮಕಾತಿ ಪ್ರಸ್ತಾವನೆಗಳನ್ನು ಆಧರಿಸಿ ಮತ್ತು ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ಮರಣ ಹೊಂದಿದ ನೌಕರರ ಕುಟುಂಬದ ಸದಸ್ಯರಿಗೆ ಅನುಕಂಪದ ನೇಮಕಾತಿ ಮಾಡುತ್ತಿರುವುದರಿಂದ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಹಣೆಯಲ್ಲಿ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್‌ಗಳಲ್ಲಿ ಎಲ್ಲಾ ಮೂಲಗಳಿಂದ ನೇಮಕಾತಿ ಹೊಂದಿದವರ ಪೈಕಿ ಅನುಕಂಪದ ನೇಮಕಾತಿ ಹೊಂದಿದವರ ಪ್ರಮಾಣ ಕಡಿಮೆ ಇರುತ್ತದೆ. ಇದರಿಂದ, ಅನುಕಂಪದ ನೇಮಕಾತಿ ಹೊಂದಿದವರ ಕಾರಣಕ್ಕೆ ಕಛೇರಿಯ ಕಾರ್ಯನಿರ್ವಹಣೆ ಗುಣಮಟ್ಟ ಕುಸಿಯುತ್ತಿದೆ ಎಂಬ ಅಂತಹ ಈ ಸಂದರ್ಭಕ್ಕೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| (ಇ) | ಬಂದಿದ್ದಲ್ಲಿ, ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಹಣೆಯಲ್ಲಿ ಗುಣಮಟ್ಟ ಹೆಚ್ಚಿಸುವ ದೃಷ್ಟಿಯಿಂದ ಮೇಲ್ಕಂಡ ಎಲ್ಲಾ ಹುದ್ದೆಗಳಿಗೆ ಅನುಕಂಪ | ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್‌ಗಳಲ್ಲಿ ಗಣನೀಯ ಪ್ರಮಾಣದ ಗ್ರೂಪ್ ಸಿ ಮತ್ತು ಡಿ ವೃಂದದ ಹುದ್ದೆಗಳು ಖಾಲಿ ಇರುವುದನ್ನು ಗಮನಿಸಿ, ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಹುದ್ದೆಗಳ ಎದುರು |

| | | |
|---|---|---|
| | ಆಧಾರಿತ ನೇಮಕಾತಿ ಮಾಡುವುದನ್ನು ನಿಲ್ಲಿಸಿ ಒಂದು ನಿರ್ದಿಷ್ಟ ಪ್ರಮಾಣಕ್ಕೆ ಸೀಮಿತಗೊಳಿಸಬಾರದೇಕೆ; ಈ ನಿಟ್ಟಿನಲ್ಲಿ ಸರ್ಕಾರದ ನಿಲುವೇನು; (ಸಂಪೂರ್ಣ ವಿವರ ನೀಡುವುದು). | ಸಾಮೂಹಿಕ ನೇರ ನೇಮಕಾತಿ ಮಾಡಲು ತುಂಬಾ ಹೆಚ್ಚಿನ ಕಾಲಾವಕಾಶ ಅಗತ್ಯವಿದ್ದುದರಿಂದ ತಕ್ಷಣದ ಕಛೇರಿಯ ಕಾರ್ಯನಿರ್ವಹಣೆಯ ಹಿತದೃಷ್ಟಿಯಿಂದ ಕೆಲವು ಹುದ್ದೆಗಳನ್ನು ಭರ್ತಿ ಮಾಡುವ ಉದ್ದೇಶಕ್ಕೆ, ಪ್ರಾದೇಶಿಕ ಆಯುಕ್ತರ ಕಛೇರಿಗಳಲ್ಲಿ ಅನುಕಂಪದ ನೇಮಕಾತಿಗೆ ಬಾಕಿ ಇರುವ ಅರ್ಹ ಪ್ರಕರಣಗಳ ಪ್ರಸ್ತಾವನೆಗಳನ್ನು ಪಡೆದು ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್‌ಗಳಲ್ಲಿ ಖಾಲಿ ಇರುವ ಹುದ್ದೆಗಳ ಎದುರು ಅನುಕಂಪದ ನೇಮಕಾತಿಗೆ ಪರಿಗಣಿಸಲು ಎಲ್ಲಾ ಜಿಲ್ಲಾ ಪಂಚಾಯತ್‌ಗಳಿಗೆ ನಿರ್ದೇಶನ ನೀಡಲಾಗಿತ್ತು. ನಂತರದ ಬೆಳವಣಿಗೆಯಲ್ಲಿ ಗಣನೀಯ ಪ್ರಮಾಣದಲ್ಲಿ ಅನುಕಂಪದ ನೇಮಕಾತಿಗಳು ಮಾಡುತ್ತಿದ್ದುದ್ದು ಕಂಡು ಬಂದ ಹಿನ್ನೆಲೆಯಲ್ಲಿ ಹೆಚ್ಚಿನ ಪ್ರಮಾಣದ ಅನುಕಂಪದ ನೇಮಕಾತಿಯಿಂದಾಗಿ, ಕಛೇರಿಯ ಕಾರ್ಯನಿರ್ವಹಣೆಯ ಗುಣಮಟ್ಟ ಕುಸಿಯುವ ಸಂಭವನೀಯತೆಯನ್ನು ಗಮನಿಸಿ, ದಿನಾಂಕ:15.9.2023ರ ಪತ್ರದಲ್ಲಿ ಎಲ್ಲಾ ಜಿಲ್ಲಾ ಪಂಚಾಯತ್‌ಗಳಿಗೆ ಪತ್ರ ಬರೆದು, ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಹುದ್ದೆಗಳ ಪೈಕಿ ಶೇ 25% ರಷ್ಟು ಹುದ್ದೆಗಳ ಎದುರು ಮಾತ್ರ ಅನುಕಂಪದ ನೇಮಕಾತಿ ಮಾಡಲು ತಿಳಿಸಲಾಗಿದೆ. ಅದರ ಪ್ರತಿಯನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ. |
| (ಈ) | ಗರಿಷ್ಠ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಹಾಗೂ ಕೆಲ ಹುದ್ದೆಗಳನ್ನು ಬಡ್ತಿ ಮತ್ತು ಅನುಕಂಪ ಆಧಾರಿತ ನೇಮಕಾತಿಗೆ ಮೀಸಲಿಟ್ಟು ಹುದ್ದೆಗಳ ಭರ್ತಿಗೆ ಕ್ರಮವಹಿಸಲು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಸರ್ಕಾರ ಉದ್ದೇಶಿಸಿದೆಯೇ; ಹಾಗಿದ್ದಲ್ಲಿ, ಈ ಕುರಿತು ವಿವರ ನೀಡುವುದು. | ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಸೇವೆಗೆ ಸಂಬಂಧಿಸಿದಂತೆ ಖಾಲಿ ಇರುವ ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ) ವೃಂದ ಮತ್ತು ನೇಮಕಾತಿ ನಿಯಮಗಳು 2020ರಲ್ಲಿ ವಿವಿಧ ವೃಂದಗಳಿಗೆ ಸಂಬಂಧಿಸಿದಂತೆ ನೇರ ನೇಮಕಾತಿ/ಮುಂಬಡ್ತಿಯಿಂದ ತುಂಬಬೇಕಾದ ಹುದ್ದೆಗಳ ಪ್ರಮಾಣವನ್ನು ಸ್ಪಷ್ಟಪಡಿಸಲಾಗಿದೆ. |
| (ಉ) | ಕಂದಾಯ ಇಲಾಖೆಯಿಂದ ದ್ವಿತೀಯ ದರ್ಜೆ ಸಹಾಯಕ/ಗ್ರಾಮ ಲೆಕ್ಕಿಗರ (ಗ್ರಾಮ ಆಡಳಿತ ಅಧಿಕಾರಿ) ವೃಂದದ ನೌಕರರಿಗೆ ಕೆಸಿಎಸ್‌ಆರ್ ನಿಯಮ 32 ರಡಿ ಪ್ರಥಮ ದರ್ಜೆ ಸಹಾಯಕ ವೃಂದದ ಹುದ್ದೆಗಳಿಗೆ ಸ್ವತಂತ್ರ ಪ್ರಭಾರದಲ್ಲಿರಿಸಿ ಜಿಲ್ಲಾ ಪಂಚಾಯತಿಗಳಲ್ಲಿ ಖಾಲಿಯಿರುವ ಪ್ರಥಮ ದರ್ಜೆ ಸಹಾಯಕ ಹುದ್ದೆಗಳಿಗೆ | ಕಂದಾಯ ಇಲಾಖೆಯಿಂದ ಕರ್ನಾಟಕ ನಾಗರಿಕ ಸೇವಾ ನಿಯಮಗಳು 1958ರ ನಿಯಮ 32 ರಡಿ ಪ್ರಥಮ ದರ್ಜೆ ಸಹಾಯಕ ಹುದ್ದೆಗೆ ಸ್ವತಂತ್ರ ಪ್ರಭಾರದಲ್ಲಿರಿಸಲ್ಪಟ್ಟ ಒಬ್ಬ ನೌಕರರು ಮಂಡ್ಯ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿರುತ್ತದೆ. |

| | |
|---|---|
| ನಿಯೋಜಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ನಿಯಮಗಳಲ್ಲಿ ಅವಕಾಶ ಇದೆಯೇ; ಈ ಕುರಿತು ಸರ್ಕಾರದ ನಿಲುವೇನು? | ಒಬ್ಬ ನೌಕರನು ಮೇಲಿನ ಹುದ್ದೆಗೆ ಸ್ಥಾನಪನ್ನ ಪದೋನ್ನತಿ ಪಡೆಯಲು ಅರ್ಹನಿದ್ದಲ್ಲಿ ಮಾತ್ರ ಅಂತಹ ನೌಕರನನ್ನು ಆ ಹುದ್ದೆಗೆ ನಿಯಮ-32 ರಡಿ ಸ್ವತಂತ್ರ ಪ್ರಭಾರದಲ್ಲಿರಿಸಲಾಗುತ್ತದೆ. ಆದ್ದರಿಂದ ನಿಯಮ-32 ರಡಿ ಸ್ವತಂತ್ರ ಪ್ರಭಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರಣಕ್ಕೆ ಒಬ್ಬ ನೌಕರರನ್ನು ಮತ್ತೊಂದು ಇಲಾಖೆಗೆ ಸಮನಾಂತರ ಹುದ್ದೆಗೆ ನಿಯೋಜಿಸುವುದನ್ನು ಯಾವುದೇ ನಿಯಮವು ನಿರ್ಬಂಧಿಸಿರುವುದು ಕಂಡು ಬರುವುದಿಲ್ಲ. |

[illegible]

(…ರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ
ಮತ್ತು ಜೈವಿಕ ತಂತ್ರಜ್ಞಾನ ಸಚಿವರು